**<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.</u>**

**ಸಿ.ಸಿ. ಸಂಖ್ಯೆ: 235/2023**

**ಸಾಕ್ಷಿಯನ್ನು ದಿಃ 02.06.2026 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**<u>ಅರ್ಜಿಯ ಮೇಲಿನ ಆದೇಶದಂತೆ ಮುಂದುವರಿದ ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ</u>**

ದಿಃ 07.03.2023 ರಂದು ನಾನು ಹುಣಸೂರು ನ್ಯಾಯಾಧೀಶರ ಮುಂದೆ ಹಾಜರಾಗಿ ಹೇಳಿಕೆಯನ್ನು ನೀಡಿದ್ದೇನೆ. ಅದನ್ನು ಈಗ ನೋಡುತ್ತಿದ್ದು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ನಿಪಿ-6 ರಲ್ಲಿ ಏನು ಬರೆಯಲಾಗಿದೆ ಎಂದು ಗೊತ್ತಿದೆ.

**<u>ಮುಂದುವರಿದ ಪಾಟೀ ಸವಾಲುಃ ಆರೋಪಿ ಪರ ಶ್ರೀ. SN ವಕೀಲರಿಂದಃ</u>**

ರಾತ್ರಿ 10 ಗಂಟೆ ಸಮಯದಲ್ಲಿ ಜನರು ಓಡಾಡುವುದಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರಿದು ಶಬ್ದ ಕೇಳಿ ಜನ ಬಂದರು ಎಂದು ನುಡಿಯುತ್ತಾರೆ. ಎಷ್ಟು ಜನ ಇದ್ದರು ಎಂದರೆ ತುಂಬಾ ಜನ ಇದ್ದರು. ಅವರ ಹೆಸರು ಹೇಳಲಾಗುತ್ತದೆಯೇ ಎಂದರೆ ತುಂಬಾ ಜನ ಇದ್ದ ಕಾರಣ ಹೆಸರು ಹೇಳಲಾಗುವುದಿಲ್ಲ. ಅಲ್ಲಿ ಅಂತಹ ಜನ ಯಾರು ಇರಲಿಲ್ಲ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಲ್ಲಿ ಯಾರಾದರೂ ಜನ ಸೇರಿದ್ದರೆ ನಾನು 4-5 ಜನರ ಹೆಸರನ್ನು ಹೇಳುತ್ತಿದ್ದೆ, ಜನರು ಸೇರದೇ ಇದ್ದ ಕಾರಣ ನಾನು ಹೆಸರು ಹೇಳುತ್ತಿಲ್ಲ ಎಂದರೆ ಸರಿಯಲ್ಲ. ಆರೋಪಿ ಕುಡಿದ ಅಮಲಿನಲ್ಲಿ ಅಸಭ್ಯವಾಗಿ ವರ್ತಿಸಿದ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗಳ ಹೆಸರು ಪ್ರಸಿಲ್ಲಾ ವಿನಿಟಾ. ಪೋಟೋ ಹಾಜರುಪಡಿಸಿದ್ದೀರಾ ಎಂದರೆ ಪೋಲೀಸರಿಗೆ ಕೊಟ್ಟಿದ್ದೇನೆ. ನಾನು ನಿಪಿ-6 ರ ಹೇಳಿಕೆಯಲ್ಲಿ ವಿಷಯಗಳನ್ನು ಸೃಷ್ಟಿ ಮಾಡಿಕೊಂಡು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ಕೃತ್ಯ ಎಸಗದೇ ಇದ್ದರೂ ಸಹ ಆರೋಪಿಗೆ ತೊಂದರೆ ಮಾಡಲೆಂದು ಸುಳ್ಳು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನನ್ನ ಬಟ್ಟೆಯನ್ನು ನಾನೇ ಸ್ವತಃ ಹರಿದು ಹಾಕಿ ದೂರು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು